ಸುವರ್ಣ ಕರ್ನಾಟಕ ಪ್ರಶಸ್ತಿ ಪುರಸ್ಕೃತ SAMYUKTA KARNATAKA
# ಸಂಯುಕ್ತ ಕರ್ನಾಟಕ
ಕನ್ನಡಿಗರ ಸಾಕ್ಷಿಪ್ರಜ್ಞೆ
ಶತಕದತ್ತ ಓಟ... ತೊಂಬತ್ತರ ನೋಟ




ಜೂನ್ ತಿಂಗಳಲ್ಲಿ ಮುಂಬೈನಲ್ಲಿ ನಡೆದ ನ್ಯಾಷನಲ್ ಲೆಜಿಸ್ಲೇಚರ್ ಕಾನ್ಫರೆನ್ಸ್ ಭಾರತ್ (ಇಂಡಿಯಾ) ಪ್ರಗತಿ ಪತ್ರವನ್ನು ರಾಜಸ್ಥಾನದ ಉದಯಪುರದಲ್ಲಿ ನಡೆದ ರಾಷ್ಟ್ರಮಟ್ಟದ ಒಂಬತ್ತನೇ ಕಾಮನ್‌ವೆಲ್ತ್ ಸಂಸ್ಥೆಯ ಸಂಘದ ಭಾರತ್ ವಲಯದ ಸಮ್ಮೇಳನದಲ್ಲಿ ಸೋಮವಾರ ಕರ್ನಾಟಕ ವಿಧಾನ ಪರಿಷತ್ ಸಭಾಪತಿಗಳಾದ ಬಸವರಾಜ ಹೊರಟ್ಟಿ ಅವರು ಬಿಡುಗಡೆಗೊಳಿಸಿದರು. ಕರ್ನಾಟಕ ವಿಧಾನಸಭೆಯ ಸಭಾಧ್ಯಕ್ಷರಾದ ಯು.ಟಿ. ಖಾದರ್, ವಿಧಾನ ಪರಿಷತ್ತಿನ ಉಪ ಸಭಾಪತಿಗಳಾದ ಎಂ.ಕೆ ಪ್ರಾಣೇಶ್, ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯದರ್ಶಿಗಳಾದ ಕೆ.ಆರ್. ಮಹಾಲಕ್ಷ್ಮಿ, ಸಭಾಪತಿಗಳ ಆಪ್ತ ಕಾರ್ಯದರ್ಶಿ ಶೈಲಾ ಕೆ.ಡಿ. ಮುಂತಾದವರಿದ್ದರು.

# ಸಮೃದ್ಧ ಸಮಾಜ ಕಟ್ಟುವಲ್ಲಿ ಜನಪ್ರತಿನಿಧಿಗಳ ಪಾತ್ರ ದೊಡ್ಡದು




ಉದಯಪುರ, ಆ.21. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಸಮೃದ್ಧ ಸಮಾಜ ಕಟ್ಟುವಲ್ಲಿ ಜನಪ್ರತಿನಿಧಿಗಳ ಪಾತ್ರ ಮಹತ್ವದ್ದು ಎಂದು ಸಭಾಪತಿ ಬಸವರಾಜ ಹೊರಟ್ಟಿ ಅವರು ಅಭಿಪ್ರಾಯಪಟ್ಟರು.

ಅವರು ಇತ್ತೀಚೆಗೆ ಮುಂಬೈಯಲ್ಲಿ ನಡೆದ ನ್ಯಾಷನಲ್ ಲೆಜಿಸ್ಲೇಟರ್ ಕಾನ್ಫರೆನ್ಸ್ ಭಾರತ್ (ಇಂಡಿಯಾ) ಇದರ ಪ್ರಗತಿ ಪುಸ್ತಕವನ್ನು ರಾಜಸ್ಥಾನದ ಉದಯ್ ಪುರದಲ್ಲಿ ನಡೆದ ರಾಷ್ಟ್ರಮಟ್ಟದ ಒಂಬತ್ತನೇ ಕಾಮನ್ವೆಲ್ತ್ ಸಂಸ್ಥೆಯ ಸಂಘದ ಭಾರತ ವಲಯದ ಸಮ್ಮೇಳನದಲ್ಲಿ ಬಿಡುಗಡೆ ಮಾಡಿ ಮಾತನಾಡಿದರು.

ಕಳೆದ 77 ವರ್ಷಗಳಿಂದ ಭಾರತ ಸಾಕಷ್ಟು ಅಭಿವೃದ್ಧಿ ಹೊಂದಿದೆ ಇನ್ನೂ ಸಾಕಷ್ಟು ಅಭಿವೃದ್ಧಿ ಹೊಂದಬೇಕಿದೆ. ಪ್ರತಿಯೊಬ್ಬ ಕಟ್ಟಕಡೆಯ ನಾಗರಿಕರಿನಿಗೆ ಸರ್ಕಾರ ನೀಡುವ ಎಲ್ಲ ಸೌಲಭ್ಯಗಳು ಸಮಾಂತರವಾಗಿ ಸಿಗಬೇಕು. ದೇಶದಲ್ಲಿ ಯಾವುದೇ ನಾಗರಿಕನಿಗೆ ಅನ್ಯಾಯ ಆಗದ ಹಾಗೆ ಅಸಮಾನತೆ ಬರದಹಾಗೆ ನೋಡಿಕೊಳ್ಳುವ ಹೊಣೆಗಾರಿಕೆ ಆಡಳಿತ ವ್ಯವಸ್ಥೆಯದ್ದಿದೆ. ಹೀಗಾಗಿ ದೇಶದ ನಾನಾ ರಾಜ್ಯಗಳು ಜನರಿಗಾಗಿ ತಂದ ಹಲವಾರು ಯೋಜನೆಗಳನ್ನು ದೇಶದ ಪ್ರತಿಯೊಬ್ಬರಿಗೂ ಸಮಾನಾಂತರವಾಗಿ ಸಿಗಬೇಕೆಂಬ ನಿಟ್ಟಿನಲ್ಲಿ ಇಂತಹಸಮ್ಮೇಳನಗಳ ಮೂಲಕ ಎಲ್ಲ ಜನಪ್ರತಿನಿಧಿಗಳು ಒಂದೆಡೆ ಸೇರಿ ಚಿಂತನಮಂಥನ ಗೈಯುವ ಮೂಲಕ ಒಂದೇ ದೇಶ, ಒಂದೇ ಆಶಯ ಎಂಬ ಕಲ್ಪನೆಯನ್ನಿಟ್ಟುಕೊಂಡು ಸಮ್ಮೇಳನ ಆಯೋಜಿಸುತ್ತಾ ಬರುತ್ತಿದೆ. ಇಂತಹ ಸಮ್ಮೇಳನಗಳು ದೇಶದ ಪ್ರಗತಿಗೆ ನಾಡಿನ ಜನರ ಅಭ್ಯುದಯಕ್ಕೆ ಸಹಕಾರಿಯಾಗಬಲ್ಲದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಕರ್ನಾಟಕ ವಿಧಾನಸಭೆಯ ಸಭಾಧ್ಯಕ್ಷರಾದ ಯು.ಟಿ. ಖಾದರ್ ವಿಧಾನ ಪರಿಷತ್ತಿನ ಉಪ ಸಭಾಪತಿಗಳಾದ ಎಂ.ಕೆ. ಪ್ರಾಣೇಶ್, ಅಧಿಕಾರಿ ವೃಂದದ ಪರವಾಗಿ ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯದರ್ಶಿ ಕೆ.ಆರ್. ಮಹಾಲಕ್ಷ್ಮಿ, ಸಭಾಪತಿಗಳ ಆಪ್ತ ಕಾರ್ಯದರ್ಶಿಗಳಾದ ಶೈಲಾ ಕೆ.ಡಿ. ಮುಂತಾದವರು ಉಪಸ್ಥಿತರಿದ್ದರು.




ಇತ್ತೀಚೆಗೆ ಮುಂಬೈನಲ್ಲಿ ನಡೆದ ನ್ಯಾಷನಲ್ ಲೆಜಿಸ್ಲೇಟರ್ ಕಾನ್ಫರೆನ್ಸ್ ಭಾರತ್(ಇಂಡಿಯಾ) ಇದರ ಪ್ರಗತಿ ಪತ್ರವನ್ನು ರಾಜಸ್ಥಾನದ ಉದಯ್‌ಪುರದಲ್ಲಿ ನಡೆದ ರಾಷ್ಟ್ರಮಟ್ಟದ 9ನೇ ಕಾಮನ್ವೆಲ್ತ್ ಸಂಸ್ಥೆಯ ಸಂಘದ ಭಾರತ್ ವಲಯದ ಸಮ್ಮೇಳನದಲ್ಲಿ ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ್ ಹೊರಟ್ಟಿಯವರು ಬಿಡುಗಡೆಗೊಳಿಸಿದರು. ಈ ಸಂದರ್ಭದಲ್ಲಿ ಕರ್ನಾಟಕ ವಿಧಾನಸಭೆಯ ಸಭಾಧ್ಯಕ್ಷರಾದ ಯು.ಟಿ ಖಾದರ್, ವಿ ಪ ಉಪ ಸಭಾಪತಿ ಎಂ.ಕೆ ಪ್ರಾಣೇಶ್, ಅಧಿಕಾರಿ ವೃಂದದ ಪರವಾಗಿ ಕರ್ನಾಟಕ ವಿ ಪ ಕಾರ್ಯದರ್ಶಿ ಕೆ.ಆರ್ ಮಹಾಲಕ್ಷ್ಮೀ, ಸಭಾಪತಿಗಳ ಆಪ್ತ ಕಾರ್ಯದರ್ಶಿ ಶೈಲಾ ಕೆ.ಡಿ ಮುಂತಾದವರು ಉಪಸ್ಥಿತರಿದ್ದರು.

### ಉದಯಪುರದಲ್ಲಿ ನಡೆದ 9ನೇ ಕಾಮನವೆಲ್ತ್ ಸಂಸದೀಯ ಸಮ್ಮೇಳನ
### ಪ್ರಜಾಪ್ರಭುತ್ವದ ಬಲವರ್ಧನೆಗೆ ಜನಪ್ರತಿನಿಧಿಗಳ ಹಾಗೂ ಸಂಸ್ಥೆಗಳ ಪಾತ್ರ ಮಹತ್ವದ್ದು
### ಸಭಾಪತಿ ಬಸವರಾಜ ಹೊರಟ್ಟಿ ಅಭಿಮತ.




ಉದಯಪುರ 22: 9 ನೇ ಕಾಮನ್‌ವೆಲ್ತ್ ಸಂಸದೀಯ ಸಂಘದ ಭಾರತ ವಲಯದ ಸಮ್ಮೇಳನ – ದೇಶದ ಸರ್ವಾಂಗೀಣ ಬೆಳವಣಿಗೆಯಲ್ಲಿ ಪ್ರಜಾಪ್ರಭುತ್ವ ಸಂಸ್ಥೆಗಳ ಪಾತ್ರ ಮಹತ್ತರವಾದುದು ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಅಭಿಮತ.

ದೇಶದ ಪ್ರಗತಿ ಹಾಗೂ ಅಭಿವೃದ್ಧಿಯ ಮುನ್ನೋಟವು ಪ್ರಜಾಪ್ರಭುತ್ವ ಸಂಸ್ಥೆಗಳ ಪರಿಣಾಮಕಾರಿ ಕಾರ್ಯಚಟುವಟಿಕೆಗಳ ಮೇಲೆ ಅವಲಂಬಿತವಾಗಿದ್ದು, ಜನಪ್ರತಿನಿಧಿಗಳ ಕ್ರಿಯಾಶೀಲತೆ ಹಾಗೂ ಪಕ್ಷಬೇಧವಿಲ್ಲದ ಅಭಿವೃದ್ಧಿಪರ ಚಿಂತನೆಯಿಂದ ಮಾತ್ರ ರಾಷ್ಟ್ರದ ಭವಿಷ್ಯ ಉಜ್ವಲವಾಗಲ್ಲದು ಎಂದು ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಅಭಿಮತ ವ್ಯಕ್ತಪಡಿಸಿದರು.

ರಾಜಸ್ಥಾನ ರಾಜ್ಯದ ಉದಯಪುರದಲ್ಲಿ ನಡೆಯುತ್ತಿರುವ ಮೂರು ದಿನಗಳ 9ನೇ ಕಾಮನ್‌ವೆಲ್ತ್ ಸಂಸದೀಯ ಸಂಘದ ಭಾರತ ವಲಯದ ಸಮ್ಮೇಳನದಲ್ಲಿ "ಪ್ರಜಾಪ್ರಭುತ್ವ ಸಂಸ್ಥೆಗಳ ಮೂಲಕ ರಾಷ್ಟ್ರವನ್ನು ಸಧೃಡಗೊಳಿಸುವಲ್ಲಿ ಜನಪ್ರತಿನಿಧಿಗಳ ಪಾತ್ರ" ಎಂಬ ವಿಷಯದ ಕುರಿತು ಅವರು ವಿಚಾರ ಮಂಡಿಸಿದರು.

ಪ್ರಜಾಪ್ರಭುತ್ವ ಬಲವರ್ಧನೆಗೊಳ್ಳುವಲ್ಲಿ ಜನಪ್ರತಿನಿಧಿಗಳ ಪಾತ್ರ ಸಹ ಅಷ್ಟೇ ಮಹತ್ವದ್ದು ಜಗತ್ತಿನಲ್ಲಿಯೇ ಅತ್ಯಂತ ದೊಡ್ಡ ಪ್ರಜಾಪ್ರಭುತ್ವ ಹೊಂದಿದ ದೇಶ ನಮ್ಮದು 140 ಕೋಟಿಗೂ ಹೆಚ್ಚು ಜನಸಂಖ್ಯೆ ಹೊಂದಿದ ಈ ದೇಶದಲ್ಲಿ ವಿವಿಧ ಭಾಷೆ, ಹಲವು ಆಚಾರ ವಿಚಾರಗಳನ್ನು ಹಾಗೂ ಸಂಪ್ರದಾಯಗಳನ್ನು ಹೊಂದಿದ ನಮ್ಮ ದೇಶದಲ್ಲಿ ಪ್ರಜಾಪ್ರಭುತ್ವ ಅಷ್ಟೇ ಗಟ್ಟಿಯಾಗಿ ಕಳೆದ 75 ವರ್ಷಗಳಿಂದ ಜನರ ಹಿತಕ್ಕಾಗಿ ಕೆಲಸ ಮಾಡುತ್ತಾ ಬಂದಿರುವುದಕ್ಕೆ ಹೆಮ್ಮೆ ಎನಿಸುತ್ತದೆ.

ನನ್ನ 43 ವರ್ಷದ ಶಾಸನ ಸಭೆಯ ಅನುಭವಗಳನ್ನು ಇಂತಹ ಸಮ್ಮೇಳನಗಳಲ್ಲಿ ಹಂಚಿಕೊಳ್ಳಲು ಖುಷಿ ಸಹ ಆಗಿದೆ. ದೇಶದ ಮೂಲೆ ಮೂಲೆಯಿಂದ ಬಂದ ಜನಪ್ರತಿನಿಧಿಗಳೊಂದಿಗೆ ರಾಷ್ಟ್ರದ ಹಿತಕ್ಕಾಗಿ ಹತ್ತಾರು ಮಹತ್ವದ ಸಂಗತಿಗಳನ್ನು ಚಿಂತನ ಮಂಥನಗೈಯುವ ಈ ಸಮ್ಮೇಳನ ಅತ್ಯಂತ ಮಹತ್ವದ್ದು.

ನಾಗರೀಕ ಸಮಾಜ ಹೆಚ್ಚು ಪ್ರಜಾಸತ್ತಾತ್ಮಕವಾಗಿರಬೇಕೆನ್ನುವುದು ಪ್ರಜಾಪ್ರಭುತ್ವದ ಮೂಲ ಆಶಯವಾಗಿದ್ದು, ಈ ಆಶಯಕ್ಕೆ ಪೂರಕವಾಗಿ ಸ್ವಾತಂತ್ರ್ಯ ಸಮಾನತೆ, ಭ್ರಾತೃತ್ವ, ಜಾತ್ಯಾತೀತತೆ, ಧಾರ್ಮಿಕ ಸಹಿಷ್ಣುತೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ, ಹಿಂದುಳಿದ ಹಾಗೂ ದಮನಿತ ವರ್ಗಗಳ